**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು- 560001**

ಸಂಖ್ಯೆ: ಸಿ3(7) ಪ್ರಾ.ಪ್ರೌ.ಶಾಶಿ ಸಾಮಾನ್ಯ ವರ್ಗಾವಣೆ /01/2023-24 ದಿನಾಂಕ:15/06/2024

**: ಅಧಿಸೂಚನೆ :**

**ವಿಷಯ:** 2023-24ನೇ ಸಾಲಿನ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಹಾಗೂ ಮುಖ್ಯೋಪಾಧ್ಯಾಯರು ಮತ್ತು ಸರ್ಕಾರಿ ಪ್ರೌಢಶಾಲಾ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳ ಸಾಮಾನ್ಯ ವರ್ಗಾವಣೆಗಳನ್ನು ಮುಂದುವರೆಸಿ ಪರಿಷ್ಕೃತ ವೇಳಾ ಪಟ್ಟಿ ಬಿಡುಗಡೆ ಮಾಡಿದ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2020 ಬೆಂಗಳೂರು ದಿನಾಂಕ:27/03/2020.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 8 ಇಟಿಆರ್ 2020 ದಿನಾಂಕ:22/07/2020
3. ಪ್ರಾಥಮಿಕ ಶಾಲಾ ಶಿಕ್ಷಕರ ವೃಂದಬಲ ನಿಗದಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಇಪಿ 442 ಪಿಬಿಎಸ್ 2022 ದಿನಾಂಕ: 29/08/2022.
4. ಪ್ರೌಢಶಾಲಾ ಶಿಕ್ಷಕರ ವೃಂದಬಲ ನಿಗದಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಇಪಿ 01 ಎಲ್‌ಬಿಪಿ 2022 ದಿನಾಂಕ: 28/01/2022.
5. ಇ.ಇ.ಡಿ.ಎಸ್ ಸುತ್ತೋಲೆ: ಇ-ಆಡಳಿತ/ಶಿಕ್ಷಕರ ಮಿತ್ರ/2020-21 ದಿನಾಂಕ: 25/08/2022
6. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] ತಿದ್ದುಪಡಿ ಕಾಯ್ದೆ-2022 ಸಂಖ್ಯೆ: ಸಂವ್ಯಾಶಾಶಿ 23 ಶಾಸನ 2022 ದಿನಾಂಕ: 13/10/2022.
7. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] (ತಿದ್ದುಪಡಿ) ನಿಯಮ-2022 ಸಂಖ್ಯೆ: ಇಪಿ 91 ಇಟಿಆರ್ 2022 ದಿನಾಂಕ: 26/12/2022
8. ಈ ಕಛೇರಿಯ ಅಧಿಸೂಚನೆ ಸಂಖ್ಯೆ: ಸಿ3(7) ಪ್ರಾ.ಪ್ರೌ.ಶಾಶಿ ಸಾಮಾನ್ಯ ವರ್ಗಾವಣೆ /01/2023-24 ದಿನಾಂಕ:15-03-2024
9. ಈ ಕಛೇರಿಯ ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಸಿ3(7) ಪ್ರಾ.ಪ್ರೌ.ಶಾಶಿ ಸಾಮಾನ್ಯ ವರ್ಗಾವಣೆ ದಿನಾಂಕ: 12/04/2024
10. ದಿನಾಂಕ: 14-06-2024ರಂದು ಸರ್ಕಾರದಿಂದ ಏಕ ಕಡತದಲ್ಲಿ ಅನುಮೊದನೆ ನೀಡಿರುವಂತೆ.

*********

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] ಅಧಿನಿಯಮ-2020 [2020ರ ಕರ್ನಾಟಕ ಅಧಿನಿಯಮ ಸಂಖ್ಯೆ:04] ಹಾಗೂ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು [ಶಿಕ್ಷಕರ ವರ್ಗಾವಣೆ ನಿಯಂತ್ರಣ] ನಿಯಮಗಳು-2020ರ ನಿಯಮಗಳಲ್ಲಿನಂತೆ ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯರನ್ನು ಒಳಗೊಂಡಂತೆ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು ಮತ್ತು ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರು/ತತ್ಸಮಾನ ವೃಂದದ ಶಿಕ್ಷಕರು ಹಾಗೂ ಸರ್ಕಾರಿ ಪ್ರೌಢ ಶಾಲಾ ಮುಖ್ಯಶಿಕ್ಷಕರು/ತತ್ಸಮಾನ ವೃಂದದ ಅಧಿಕಾರಿಗಳಿಗೆ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆಗೆ ಮಾರ್ಗಸೂಚಿಗಳನ್ನೊಳಗೊಂಡಂತೆ ವೇಳಾಪಟ್ಟಿಯನ್ನು ಉಲ್ಲೇಖ-8ರಂತೆ ನಿಗದಿಪಡಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ ಪ್ರಸ್ತುತ ಚುನಾವಣಾ ನೀತಿ ಸಂಹಿತೆ ಮುಕ್ತಾಯವಾಗಿದ್ದು ಉಲ್ಲೇಖ 10ರಂತೆ ಸದರಿ ಶಿಕ್ಷಕರ ಸಾಮಾನ್ಯ ಕೋರಿಕೆ ವರ್ಗಾವನೆಯನ್ನು ಮುಂದುವರೆಸುವ ಕುರಿತಂತೆ ಸರ್ಕಾರಕ್ಕೆ ಏಕ ಕಡತದಲ್ಲಿ ಅನುಮೋದನೆ ಕೋರಿ ಸಲ್ಲಿಸಲಾಗಿರುತ್ತದೆ. ಮುಂದುವರೆದು ಉಲ್ಲೇಖ-10ರಂತೆ ಸರ್ಕಾರ ಪರಿಶೀಲಿಸಿ ಸದರಿ ವರ್ಗಾವಣಾ ಪ್ರಕ್ರಿಯೆಯನ್ನು ಮುಂದುವರೆಸಲು ಕೆಳಕಂಡಂತೆ ಅನುಮೊದನೆ ನೀಡಿರುತ್ತದೆ.

- 2020ರಲ್ಲಿ ಜಾರಿಯಾದ ಶಿಕ್ಷಕರ ವರ್ಗಾವಣೆ ಕಾಯ್ದೆಯಂತೆ ಹೆಚ್ಚುವರಿ ಶಿಕ್ಷಕರ ಸಮರ್ಪಕ ಮರುಹಂಚಿಕೆ ಮತ್ತು ಕಡ್ಡಾಯ ವಲಯ ವರ್ಗಾವಣೆಗಳನ್ನು ಒಂದರ ನಂತರ ಒಂದನ್ನು ಪರ್ಯಾಯ ವರ್ಷಗಳಲ್ಲಿ ಹಮ್ಮಿಕೊಳ್ಳಬೇಕಾಗಿರುತ್ತದೆ. ಪ್ರಸ್ತುತ ದಿನಾಂಕ: 15-03-2024ರ ಅಧಿಸೂಚನೆಯಂತೆ ಕಡ್ಡಾಯ ವಲಯ ವರ್ಗಾವಣೆ ಒಳಗೊಂಡಂತೆ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿತ್ತು. ಈ ಮಧ್ಯ ಲೋಕಸಭಾ ಚುನಾವಣಾ ಘೋಷಣೆಯಾದ ಹಿನ್ನೆಲೆಯಲ್ಲಿ ಇಡೀ ವರ್ಗಾವಣೆ ಪ್ರಕ್ರಿಯೆಯು ಸರಿ ಸುಮಾರು 03 ತಿಂಗಳ ಕಾಲ ಮುಂದೂಡುವ ಅನಿವಾರ್ಯತೆ ಉದ್ಭವಿಸಿದ ಹಿನ್ನೆಲೆಯಲ್ಲಿ ವರ್ಗಾವಣೆ ಪ್ರಕ್ರಿಯೆನ್ನು

ಮುಂದುವರಿಸಲು ಸಾಧ್ಯವಾಗಿರುವುದಿಲ್ಲ. ಮುಂದುವರೆದು ಉಲ್ಲೇಖ-10ರಲ್ಲಿ ಸರ್ಕಾರದ ಆದೇಶದಂತೆ ಶೈಕ್ಷಣಿಕ ವರ್ಷ ಪ್ರಾರಂಭಿಸಿದ ನಂತರ ವಲಯ ವರ್ಗಾವಣೆ ಮಾಡುವುದು ಸೂಕ್ತವಲ್ಲವಾದ್ದರಿಂದ, ಪ್ರಸ್ತುತ ವರ್ಷ ವರ್ಗಾವಣೆಯಲ್ಲಿ ಮಾತ್ರ ವಲಯ ವರ್ಗಾವಣೆಯನ್ನು ಕೈಬಿಟ್ಟು ಇತರೆ ವರ್ಗಾವಣೆಗಳನ್ನು ಮುಂದುವರೆಸಲು ಅನುಮತಿಸಿರುತ್ತದೆ. ಆದ್ದರಿಂದ 2023-24ನೆ ಸಾಲಿನ ವರ್ಗಾವಣೆ ಪ್ರಕ್ರಿಯೆಯಲ್ಲಿ ವಲಯ ವರ್ಗಾವಣೆ ಪ್ರಕ್ರಿಯೇಯನ್ನು ಕೈಬಿಡಲಾಗಿದೆ.

- ಎಲ್ಲಾ ಸಾಮಾನ್ಯ/ಪರಸ್ಪರ ವರ್ಗಾವಣೆಗಳನ್ನು On Line ಮೂಲಕವೇ ನಿರ್ವಹಿಸಬೇಕಾಗಿದ್ದು ಶಿಕ್ಷಕರು ವರ್ಗಾವಣಾ ಅರ್ಜಿ ಸಲ್ಲಿಸುವುದು, ಅರ್ಜಿಗಳ/ ಆದ್ಯತೆಗಳ ಪರಿಶೀಲನೆ, ಅರ್ಜಿಗಳ/ ಆದ್ಯತೆಗಳ ಅನುಮೋದನೆ/ ತಿರಸ್ಕಾರ, ಕರಡು ಅರ್ಹ/ ಅನರ್ಹ(ಕಾರಣ ಸಹಿತ) ಪಟ್ಟಿ ಪ್ರಕಟಣೆ, ಆಕ್ಷೇಪಣೆಗಳ ಸಲ್ಲಿಕೆ, ಅಂತಿಮ ಆದ್ಯತಾ ಪಟ್ಟಿ ಪ್ರಕಟಣೆ, ಆದ್ಯತಾ ಪಟ್ಟಿ ಅನುಸಾರ ವರ್ಗಾವಣಾ ಕೌನ್ಸೆಲಿಂಗ್ ಪ್ರಕ್ರಿಯೆಗಳು ಇಲಾಖೆಯ ನಿಗದಿತ ತಂತ್ರಾಂಶದಲ್ಲಿಯೇ ನಿರ್ವಹಿಸುವುದು ಕಡ್ಡಾಯವಾಗಿರುತ್ತದೆ.
- ಉಳಿದಂತೆ ಸದರಿ ವರ್ಗಾವಣಾ ಪ್ರಕ್ರಿಯೇಯ ಮಾನದಂಡಗಳು ಉಲ್ಲೇಖ-08ರ ಅಧಿಸೂಚನೆಯಂತೆ ಯತಾವತ್ತಾಗಿ ಮುಂದುವರೆಯುತ್ತದೆ.
- ಚುನಾವಣ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಈ ಹಿಂದೆ ಸದರಿ ವರ್ಗಾವಣೆಗೆ ನಿಗಧಿಪಡಿಸಿದ ವೇಳಾ ಪಟ್ಟಿಯಂತೆ ಪ್ರಕ್ರಿಯೆ ನಿರ್ವಹಿಸಲು ಸಾಧ್ಯವಾಗದಿರುವ ಹಿನ್ನೆಲೆಯಲ್ಲಿ ಪ್ರಸ್ತುತ ದಿನಗಳಿಗೆ ವೇಳಾಪಟ್ಟಿಯನ್ನು ಪರಿಷ್ಕರಿಸಿ ವಿಸ್ತರಿಸಿದ್ದು ಅದರಂತೆ ಅರ್ಜಿ ಸಲ್ಲಿಸುವ ದಿನಾಂಕವನ್ನು 20-06-2024ಕ್ಕೆ ವಿಸ್ತರಿಸಿ ಅಂತಿಮಗೊಳಿಸಿದೆ ಪ್ರಯುಕ್ತ ನಿಯಮಾನುಸಾರ ಕೋರಿಕೆ ವರ್ಗಾವಣೆಗೆ ಅರ್ಜಿ ಸಲ್ಲಿಸುವುದು ಅದರಂತೆ ಮುಂದಿನ ಪ್ರಕ್ರಿಯೆಗಳನ್ನು ಕೈಗೊಳ್ಳಲು ಎಲ್ಲಾ ಪ್ರಾಧಿಕಾರಿಗಳಿಗೆ ಸೂಚಿಸಿದೆ.
- ವರ್ಗಾವಣಾ ಅಧಿನಿಯಮ ಮತ್ತು ನಿಯಮಗಳನ್ನು ಎಲ್ಲಾ ಹಂತದ ವರ್ಗಾವಣಾ ಪ್ರಾಧಿಕಾರಿಗಳು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು. ಮಾರ್ಗಸೂಚಿಗಳಲ್ಲಿ ತಿಳಿಸಿರುವಂತೆ ಹಾಗೂ ಶಿಕ್ಷಕರ ವರ್ಗಾವಣೆ ಕಾಯ್ದೆ/ನಿಯಮಗಳು-2020 ಮತ್ತು ತಿದ್ದುಪಡಿ ಕಾಯ್ದೆ/ನಿಯಮಗಳು-2022ರ ಪ್ರಕಾರ ಕ್ರಮವಹಿಸಲು ಸೂಚಿಸಿದೆ.

ಮೇಲ್ಕಂಡಂತೆ ಸಿದ್ದಪಡಿಸಿದ ಅಧಿಸೂಚನೆಯು, ತಾಂತ್ರಿಕ/ ಆಡಳಿತಾತ್ಮಕ ಕಾರಣಗಳಿಂದಾಗಿ ವ್ಯತ್ಯಯಗಳುಂಟಾದಲ್ಲಿ ಅವಶ್ಯಕತೆಗೆ ಅನುಗುಣವಾಗಿ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟಿರುತ್ತದೆ. ಈ ಸಂಬಂಧ ವರ್ಗಾವಣಾ ಪ್ರಕ್ರಿಯೆಯನ್ನು ನಿರ್ವಹಿಸುವ ಸಲುವಾಗಿ ಪರಿಷ್ಕೃತ ವರ್ಗಾವಣಾ ವೇಳಾಪಟ್ಟಿಯನ್ನು ಸಿದ್ದಪಡಿಸಿ ಅನುಬಂಧದಲ್ಲಿ ಲಗತ್ತಿಸಿ ಮುಂದಿನ ಕ್ರಮಕ್ಕೆ ಸಕ್ಷಮಪ್ರಾಧಿಕಾರಿಗಳಿಗೆ ಯಾವುದೆ ಲೋಪವಾಗದಂತೆ ಅನುಷ್ಠಾನಕ್ಕೆ ಸೂಚಿಸಿದೆ.

(ಬಿ.ಬಿ. ಕಾವೇರಿ) ಭಾ.ಆ.ಸೇ.
ಆಯುಕ್ತರು.
ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು.

**ಇವರಿಗೆ, ಅಗತ್ಯ ಕ್ರಮಕ್ಕಾಗಿ**

1) ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ
2) ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
3) ಸಹ ನಿರ್ದೇಶಕರು, ಬೆಂಗಳೂರು/ಮೈಸೂರು/ಅಪರ ಆಯುಕ್ತರ ಕಛೇರಿ ಗುಲ್ಬರ್ಗಾ/ಧಾರವಾಡ
4) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು/ಮೈಸೂರು /ಬೆಳಗಾವಿ/ಕಲಬುರಗಿ
5) ಶಾಲಾ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)
6) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಉಪನಿರ್ದೇಶಕರು[ಆಡಳಿತ] ರವರ ಮೂಲಕ)

**ಪ್ರತಿಯನ್ನು:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ರವರ ಆದ್ಯ ಅವಗಾಹನೆಗಾಗಿ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ .
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.

5. ಜಂಟಿ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
7. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ
8. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು ರವರುಗಳಿಗೆ.
9. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು ರವರಿಗೆ.
10. ಹಿರಿಯ ಸಹಾಯಕ ನಿರ್ದೇಶಕರು, ಇ–ಆಡಳಿತ ಶಾಖೆ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು–01 ರವರಿಗೆ ಪ್ರತಿಯನ್ನು ರವಾನಿಸುತ್ತಾ, ಉದ್ದೇಶಿತ ವರ್ಗಾವಣೆ ಪ್ರಕ್ರಿಯೆಗೆ "ತಂತ್ರಾಂಶವನ್ನು" ನಿಯಮಗಳಡಿ ಸಜ್ಜುಗೊಳಿಸಿ ಯಾವುದೇ ಲೋಪಗಳು ಉದ್ಭವಿಸದಂತೆ, ಸೂಕ್ತ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.
11. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
12. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ
13. ಹಿರಿಯ ಸಹಾಯಕ ನಿರ್ದೇಶಕರು(ಇ–ಆಡಳಿತ) ಇವರಿಗೆ ಕಳುಹಿಸುತ್ತಾ ಇಲಾಖಾ ವೆಬ್–ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
14. ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು- 560001**

**ಅನುಬಂಧ-1**

**I. ಪರಿಷ್ಕೃತ ವರ್ಗಾವಣಾ ವೇಳಾ ಪಟ್ಟಿ :**

| ಕ್ರ.ಸ | ವಿವರ | ವೃಂದ | | | ಕ್ರಮ ವಹಿಸುವ ಅಧಿಕಾರಿಗಳು |
|---|---|---|---|---|---|
| | ವರ್ಗಾವಣೆ ವಿಧ | ಪ್ರಾಥಮಿಕ ಶಿಕ್ಷಕರ ವೃಂದ | ಪ್ರೌಢಶಾಲಾ ಶಿಕ್ಷಕರ ವೃಂದ | ಪ್ರೌಢಶಾಲಾ ಮುಖ್ಯಶಿಕ್ಷಕರ ವೃಂದ | |
| ಅ. | ನಿರ್ದಿಷ್ಟಪಡಿಸಿದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ವರ್ಗಾವಣೆ | | | | |
| 1 | ದಿನಾಂಕ: 31/05/2024ಕ್ಕೆ ಗರಿಷ್ಠ 5 ವರ್ಷದ ಅವಧಿ ಪೂರ್ಣಗೊಂಡು ನಿರ್ದಿಷ್ಠಪಡಿಸಿದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ತಾತ್ಕಾಲಿಕ ಕರಡು ಪಟ್ಟಿ (ಅಂಕಗಳೊಂದಿಗೆ) ಪ್ರಕಟಣೆ. | 18/06/2024 | | | ಕ್ಷೇತ್ರಶಿಕ್ಷಣಾಧಿಕಾರಿಗಳು/ ಉಪನಿರ್ದೇಶಕರು |
| 2 | ಪ್ರಕಟಿತ ತಾತ್ಕಾಲಿಕ ಕರಡು ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸಲ್ಲಿಸಲು ನಿಗಧಿಪಡಿಸಿದ ಅವಧಿ | 18/06/2024 ರಿಂದ 21/06/2024 | | | ಶಿಕ್ಷಕರು |
| 3 | ಆಕ್ಷೇಪಣೆ/ದಾಖಲೆಗಳ ಪರಿಶೀಲನೆ | 18/06/2024 ರಿಂದ 22/06/2024 | | | ಕ್ಷೇತ್ರ ಶಿಕ್ಷಣಾಧಿಕಾರಿಗಳು/ಉಪ ನಿರ್ದೇಶಕರು |
| 4 | ಆಕ್ಷೇಪಣೆಗಳನ್ನು ಪರಿಶೀಲಿಸಿದ ನಂತರ ಗರಿಷ್ಟ 5 ವರ್ಷ ಅವಧಿ ಪೂರ್ಣಗೊಳಿಸಿ ಶಾಲೆಗೆ ಹಿಮ್ಮುಖ ವರ್ಗಾವಣೆಗೆ ಅರ್ಹರಿರುವ ನಿರ್ಧಿಷ್ಟಪಡಿಸಿದ ಶಿಕ್ಷಕರ ಅಂತಿಮ ಆದ್ಯತಾ ಕರಡು ಪಟ್ಟಿ ಪ್ರಕಟಣೆ | 24/06/2024 | | | ಕ್ಷೇತ್ರಶಿಕ್ಷಣಾಧಿಕಾರಿಗಳು/ ಉಪನಿರ್ದೇಶಕರು |
| ಆ. | ಕೋರಿಕೆ / ಪರಸ್ಪರ ವರ್ಗಾವಣೆ ಕ್ರಮಗಳು | | | | |
| 1 | 1. ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗಳಿಗೆ ಶಿಕ್ಷಕರಿಂದ ಅರ್ಜಿಗಳನ್ನು ಆಹ್ವಾನಿಸುವುದು. ಅರ್ಜಿ ಸಲ್ಲಿಕೆಗೆ ಅವಧಿ ಮತ್ತು ಘಟಕದೊಳಗಿನ ಮತ್ತು ಹೊರಗೆ ಕೋರಿಕೆ ವರ್ಗಾವಣೆಗಳಿಗೆ ಮತ್ತು ಪರಸ್ಪರ ವರ್ಗಾವಣೆಗಳಿಗೆ ಅರ್ಜಿಗಳ ಆಹ್ವಾನ ಮತ್ತು ಸದರಿ ಅರ್ಜಿಯಲ್ಲಿಯೇ ಆದ್ಯತೆಯನ್ನು ಕೋರಲು ದಾಖಲೆ ಸಲ್ಲಿಸಲು ಅವಕಾಶ.<br>2. ಕನಿಷ್ಠ(3) ವರ್ಷ ಅವಧಿ ಪೂರೈಸಿದ ಹಾಗೂ ಗರಿಷ್ಠ(5) ವರ್ಷ ಅವಧಿ ಪೂರೈಸದ ನಿರ್ದಿಷ್ಠಪಡಿಸಿದ ಹುದ್ದೆಗಳಲ್ಲಿ ಮತ್ತು ತಾಂತ್ರಿಕ | 20/06/2024 ಸಂಜೆ 5-30 ರವರೆಗೆ | | | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಸಂಬಂಧಪಟ್ಟಂತೆ ಜಂಟಿ ನಿರ್ದೇಶಕರು(ಆಡಳಿತ) ಬೆಂಗಳೂರು ಮತ್ತು ನಿರ್ದೇಶಕರು ಧಾರವಾಡ/ಕಲಬುರುಗಿ ಅಪರ ಆಯುಕ್ತಾಲಯ ಹಾಗೂ ವರ್ಗಾವಣೆ ಬಯಸುವ ಶಿಕ್ಷಕರ / ಮುಖ್ಯಶಿಕ್ಷಕರ ವೃಂದ |

| | | | |
|---|---|---|---|
| | ಸಹಾಯಕರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ವರ್ಗಾವಣೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು/ಆಧ್ಯತೆ ಕ್ಲೇಮ್ ಮಾಡಲು ಅವಕಾಶ<br>3. ಮೇಲಿನಂತೆ ಅರ್ಜಿ ಸಲ್ಲಿಸುವ ಶಿಕ್ಷಕರು ಆನ್‌ಲೈನ್ ತಂತ್ರಾಂಶದಲ್ಲಿ ಮಾತ್ರ ಅರ್ಜಿಯನ್ನು ಸಲ್ಲಿಸುವುದು ಮತ್ತು ಪೂರಕ ಮೂಲ ದಾಖಲೆಗಳನ್ನು ಅಪ್‌ಲೋಡ್ ಮಾಡಲು ನಿಗಧಿಪಡಿಸಿದ ಅವಧಿ. | | |
| | ಅರ್ಜಿಗಳ ಪರಿಶೀಲನೆಗೆ ಕಡೆ ದಿನಾಂಕ | 27/06/2024ರವರೆಗೆ | ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ |
| 2 | • ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗಳಿಗೆ ಅರ್ಜಿ ಸಲ್ಲಿಸಿರುವ ಶಿಕ್ಷಕರ ಪಟ್ಟಿ ಪ್ರಕಟಣೆ.<br>ಜಿಲ್ಲೆಯ ಒಳಗೆ / ವಿಭಾಗದ ಒಳಗೆ / ವಿಭಾಗದ ಹೊರಗೆ ಕೋರಿಕೆ ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಿರುವ ಶಿಕ್ಷಕರುಗಳ ಕರಡು ಅರ್ಹ/ಅನರ್ಹ ಪಟ್ಟಿ ಪ್ರಕಟಣೆ. (ಅಂಕಗಳ ಸಹಿತ ಮತ್ತು ವಿವಿಧ ಆದ್ಯತೆಗಳ ಸಹಿತ)[ತಂತ್ರಾಂಶದಲ್ಲಿದ್ದಂತೆ]<br>• ಕನಿಷ್ಟ(3) ವರ್ಷ ಅವಧಿ ಪೂರೈಸಿದ ಹಾಗೂ ಗರಿಷ್ಠ(5) ವರ್ಷ ಅವಧಿ ಪೂರೈಸದ ನಿರ್ದಿಷ್ಟಪಡಿಸಿದ ಮತ್ತು ತಾಂತ್ರಿಕ ಸಹಾಯಕರ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವರ್ಗಾವಣೆಗೆ ಅರ್ಜಿ ಸಲ್ಲಿಸಿರುವ ಶಿಕ್ಷಕರ ಕರಡು ಪಟ್ಟಿ ಪ್ರಕಟಣೆ. | 29/06/2024 | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು ಹಾಗೂ ಪ್ರೌಢ ಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಸಂಬಂಧಪಟ್ಟಂತೆ ಜಂಟಿ ನಿರ್ದೇಶಕರು (ಆಡಳಿತ) ಬೆಂಗಳೂರು ಮತ್ತು ನಿರ್ದೇಶಕರು ಧಾರವಾಡ/ಕಲಬುರುಗಿ ಅಪರ ಆಯುಕ್ತಾಲಯ |
| 3 | ಕರಡು ಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ನಿಗಧಿಪಡಿಸಿರುವ ಅವಧಿ | 29/06/2024 ರಿಂದ 05/07/2024 | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಸಂಬಂಧಪಟ್ಟಂತೆ ಜಂಟಿ ನಿರ್ದೇಶಕರು (ಆಡಳಿತ) ಬೆಂಗಳೂರು ಮತ್ತು ನಿರ್ದೇಶಕರು ಧಾರವಾಡ/ಕಲಬುರುಗಿ ಅಪರ ಆಯುಕ್ತಾಲಯ |

| | | | |
|---|---|---|---|
| 4 | ಜಿಲ್ಲೆಯ ಒಳಗೆ / ವಿಭಾಗದ ಒಳಗೆ / ವಿಭಾಗದ ಹೊರಗೆ ಕೋರಿಕೆ ವರ್ಗಾವಣೆ ಬಯಸಿ ಅರ್ಜಿ ಸಲ್ಲಿಸಿರುವ ಶಿಕ್ಷಕರುಗಳ ತಾತ್ಕಾಲಿಕ ಆದ್ಯತಾ ಪಟ್ಟಿಗೆ ಸಲ್ಲಿಕೆಯಾಗುವ ಆಕ್ಷೇಪಣೆಗಳ ಪರಿಶೀಲನೆ | 01/07/2024 ರಿಂದ 06/07/2024 | ಕ್ಷೇತ್ರಶಿಕ್ಷಣಾಧಿಕಾರಿಗಳು/ ಉಪನಿರ್ದೇಶಕರು |
| 5 | ಕೋರಿಕೆ ಮತ್ತು ಪರಸ್ಪರ ವರ್ಗಾವಣೆಯ ತಾತ್ಕಾಲಿಕ ಆಧ್ಯತಾ ಪಟ್ಟಿ ಪ್ರಕಟಣೆ | 09/07/2024 | ಕ್ಷೇತ್ರಶಿಕ್ಷಣಾಧಿಕಾರಿಗಳು/ ಉಪನಿರ್ದೇಶಕರು |
| 6 | ಮೇಲಿನಂತೆ ಪ್ರಕಟಿಸಿರುವ ನಿರ್ದಿಷ್ಟಪಡಿಸಿದ ಹುದ್ದೆಗಳಲ್ಲಿ ಗರಿಷ್ಠ 5 ವರ್ಷಗಳ ಸೇವೆ ಪೂರ್ಣಗೊಳಿಸಿ ಹಿಮ್ಮುಖ ವರ್ಗಾವಣೆಗೆ ಅರ್ಹರಿರುವ/ಕೋರಿಕೆ-ಪರಸ್ಪರ ವರ್ಗಾವಣೆಗೆ ಪ್ರಕಟಿಸಲಾಗಿರುವ ತಾತ್ಕಾಲಿಕ ಕರಡು ಪಟ್ಟಿಗೆ ಸಾರ್ವಜನಿಕ ಕುಂದು ಕೊರತೆ ಅಧಿಕಾರಿಗಳಿಗೆ ಬಾಧಿತ ಶಿಕ್ಷಕರು ಆಕ್ಷೇಪಣೆಗಳನ್ನು ಸಲ್ಲಿಸಲು ನಿಗಧಿಪಡಿಸಿರುವ ಅವಧಿ. | ದಿನಾಂಕ: 10/07/2024 ರಿಂದ 12/07/2024 ರವರೆಗೆ ಸಂಬಂಧಿಸಿದ ಪಟ್ಟಿಯಿಂದ ಬಾದಿತ ಶಿಕ್ಷಕರು ವಿಭಾಗೀಯ ಸಹನಿರ್ದೇಶಕರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸುವುದು.<br>ದಿನಾಂಕ: 15/07/2024 ರಂದು ವಿಭಾಗೀಯ ಜಂಟಿ ನಿರ್ದೇಶಕರು ವ್ಯಾಪ್ತಿಯ ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರೊಂದಿಗೆ ಸಮಾಲೋಚಿಸಿ ಆಲಿಕೆ ನಿಗಧಿಪಡಿಸಿ ಆಲಿಕೆ ಪ್ರಕ್ರಿಯೆಯವನ್ನು ಹಮ್ಮಿಕೊಂಡು ಸೂಕ್ತ ಲಿಖಿತ ಸಮಜಾಯಿಷಿಯನ್ನು ಸಂಬಂಧಿತರಿಗೆ ನೀಡತಕ್ಕದ್ದು.<br>ನಂತರ ವಿಭಾಗೀಯ ಜಂಟಿನಿರ್ದೇಶಕರು ಮೇಲಿನ ಪ್ರಕ್ರಿಯೆಯಲ್ಲಿ ಸಿಂಧುವಾದ ಆಕ್ಷೇಪಣೆಗಳು/ ಅರ್ಜಿಗಳು ಸಲ್ಲಿಕೆಯಾಗಿದ್ದಲ್ಲಿ ಪರಿಗಣಿಸಬಹುದಾದ ಮತ್ತು ಪರಿಗಣಿಸಲು ಅನರ್ಹ ಪ್ರಕರಣಗಳ ಪಟ್ಟಿಯನ್ನು ಕಾರಣ ಸಹಿತ ವಿವರವಾದ ವರದಿಯನ್ನು ದಿನಾಂಕ: 16/07/2024 ರಂದು ಆಯಾ ವರ್ಗಾವಣಾ ಪ್ರಾಧಿಕಾರಿಗಳಿಗೆ ಸಲ್ಲಿಸುವುದು. ಅನರ್ಹ ಶಿಕ್ಷಕರಿಗೆ ವ್ಯಾಪ್ತಿಯ ಜಂಟಿ ನಿರ್ದೇಶಕರು ವಿವರವಾದ ಸೂಕ್ತ ಹಿಂಬರಹವನ್ನು ನೀಡುವುದು | |
| **ಈ** | **ನಿರ್ದಿಷ್ಟಪಡಿಸಿದ ಹುದ್ದೆಗಳ ವರ್ಗಾವಣೆ/ ಕೋರಿಕೆ/ ಪರಸ್ಪರ ವರ್ಗಾವಣೆ ಅಂತಿಮ ಆಧ್ಯತಾ ಪಟ್ಟಿ ಪ್ರಕಟಣೆ** | | |
| 1 | ನಿರ್ಧಿಷ್ಟ ಪಡಿಸಿದ ಹುದ್ದೆಗಳಲ್ಲಿ ಗರಿಷ್ಠ ಸೇವೆ ಸಲ್ಲಿಸಿರುವ ಮತ್ತು ವರ್ಗಾವಣೆಗೆ ಕೌನ್ಸಿಲಿಂಗ್‌ಗೆ ಹಾಗೂ ಕೋರಿಕೆ ಮತ್ತು ಪರಸ್ಪರ ವರ್ಗಾವಣಾ ಕೌನ್ಸಿಲಿಂಗ್‌ಗೆ ಅರ್ಹರಿರುವ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿ ಪ್ರಕಟ | 18/07/2024 | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು |
| 3 | ದಿನಾಂಕ: 31/05/2024 ರಲ್ಲಿದ್ದಂತೆ ಖಾಲಿ ಹುದ್ದೆಗಳ ಪ್ರಕಟಣೆ. | 10/07/2024 | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು |

| **4** | **(1) ಜಿಲ್ಲಾ ಹಂತದ ವರ್ಗಾವಣೆ ಕೌನ್ಸಿಲಿಂಗ್ ಕ್ರಮಗಳು [ಜಿಲ್ಲೆಯ ಒಳಗೆ]** | | | | |
|---|---|---|---|---|---|
| ಕ್ರ.ಸ | ವಿವರ | ಪ್ರಾಥಮಿಕ ಶಿಕ್ಷಕರ ವೃಂದ | ಪ್ರೌಢಶಾಲಾ ಶಿಕ್ಷಕರ ವೃಂದ | ಪ್ರೌಢಶಾಲಾ ಮುಖ್ಯಶಿಕ್ಷಕರ ವೃಂದ | ಕ್ರಮ ವಹಿಸುವ ಅಧಿಕಾರಿಗಳು |
| ಅ | ಅಂತಿಮ ಆದ್ಯತಾ ಪಟ್ಟಿಯಂತೆ ಗರಿಷ್ಠ (05 ವರ್ಷ) ಅವಧಿ ಮುಗಿದ ನಿರ್ದಿಷ್ಠಪಡಿಸಿದ ಮತ್ತು ತಾಂತ್ರಿಕ ಸಹಾಯಕರ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ.(ಕೋರಿಕೆ ವರ್ಗಾವಣೆ ಪೂರ್ವದಲ್ಲಿ) | 19/07/2024 ಪೂರ್ವಾಹ್ನ | 19/07/2024 ಅಪರಾಹ್ನ | 20/07/2024 | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು |
| ಆ | ಜಿಲ್ಲಾ ಹಂತದಲ್ಲಿ | | | | ವ್ಯಾಪ್ತಿಯ ಜಿಲ್ಲಾ |

| | | | | | |
|---|---|---|---|---|---|
| | ನಿರ್ದಿಷ್ಟಪಡಿಸಿದ ಹುದ್ದೆಗಳ ಕೌನ್ಸಿಲಿಂಗ್ ನಂತರ ಉಳಿಕೆಯಾಗುವ ಶಿಕ್ಷಕರನ್ನು ಜಿಲ್ಲೆಯೊಳಗೆ ಪಿ.ಟಿ.ಆರ್ ಪ್ರಕಾರ ಅತೀ ಹೆಚ್ಚಿನ ಮಕ್ಕಳ ದಾಖಲಾತಿ ಇರುವ ಶಾಲೆಗಳಲ್ಲಿ ಇಳಿಕೆ ಕ್ರಮಾಂಕದಲ್ಲಿ ಶಿಕ್ಷಕರ ಮರುಹೊಂದಾಣಿಕೆ ಕ್ರಮಗಳು–ಜಿಲ್ಲಾ ಹಂತದಲ್ಲಿ | 22/07/2024 ಪೂರ್ವಾಹ್ನ | 22/07/2024 ಅಪರಾಹ್ನ | ------- | ಉಪನಿರ್ದೇಶಕರು |
| ಇ | ಕೌನ್ಸಿಲಿಂಗ್‌ಗೆ ಲಭ್ಯವಿರುವ ವೃಂದವಾರು/ ವಿಷಯವಾರು ಖಾಲಿ ಹುದ್ದೆಗಳ ಮರು ಪ್ರಕಟಣೆ | 23/07/2024 | 23/07/2024 | ಅನ್ವಯವಾಗುವುದಿಲ್ಲ | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು |
| ಈ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಕೋರಿಕೆ ವರ್ಗಾವಣೆಗಳ ಗಣಕೀಕೃತ ಕೌನ್ಸೆಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ | 24/07/2024 ರಿಂದ 25/07/2024 | 26/07/2024 ರಿಂದ 27/07/2024 | ಅನ್ವಯವಾಗುವುದಿಲ್ಲ | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು |
| ಉ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಪರಸ್ಪರ ವರ್ಗಾವಣೆಗಳ ಗಣಕೀಕೃತ ಕೌನ್ಸೆಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ. | 29/07/2024 ಪೂರ್ವಾಹ್ನ | 29/07/2024 ಅಪರಾಹ್ನ | ಅನ್ವಯವಾಗುವುದಿಲ್ಲ | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು |
| ಊ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಕನಿಷ್ಠ (3 ರಿಂದ 5 ವರ್ಷದೊಳಗಡೆ) ಅವಧಿ ಪೂರೈಸಿದ ನಿರ್ದಿಷ್ಟಪಡಿಸಿದ ಮತ್ತು ತಾಂತ್ರಿಕ ಸಹಾಯಕರ ಕೋರಿಕೆ ವರ್ಗಾವಣೆಯ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ.<br>• ಸರ್ಕಾರದ ಆದೇಶದ ಮೇರೆಗೆ ನಿರ್ದಿಷ್ಟಪಡಿಸಿದ ಹುದ್ದೆಗಳಿಗೆ ವರ್ಗಾವಣೆಗೊಂಡಿದ್ದು ಲಿಖಿತ ಪರೀಕ್ಷೆಯಲ್ಲಿ ಅರ್ಹತೆ ಹೊಂದದೇ ಇರುವ ಅಭ್ಯರ್ಥಿಗಳಿಗೆ ಹಾಗೂ ತಾಂತ್ರಿಕ ಸಹಾಯಕರುಗಳು ಆಯ್ಕೆಯಾಗದಿದ್ದಲ್ಲಿ ಅಂತಹವರುಗಳನ್ನು ಕೌನ್ಸಿಲಿಂಗ್ ಮೂಲಕ ಪ್ರಸ್ತುತ ಕರ್ತವ್ಯ | 30/07/2024 ಪೂರ್ವಾಹ್ನ | 30/07/2024 ಅಪರಾಹ್ನ | ಅನ್ವಯವಾಗುವುದಿಲ | ವ್ಯಾಪ್ತಿಯ ಜಿಲ್ಲಾ ಉಪನಿರ್ದೇಶಕರು |

| | | | | | |
|---|---|---|---|---|---|
| | ನಿರ್ವಹಿಸುತ್ತಿರುವ ಜಿಲ್ಲೆಯ ಶಾಲೆಗೆ ಸ್ಥಳ ನಿಯುಕ್ತಿಗೊಳಿಸಲಾಗುವುದು. (ಜಿಲ್ಲೆಯೊಳಗಿನ ಕೋರಿಕೆ ವರ್ಗಾವಣೆ ನಂತರ) | | | | |
| **(3) ವಿಭಾಗೀಯ ಹಂತದ ವರ್ಗಾವಣೆ ಕ್ರಮಗಳು [ವಿಭಾಗದ ಒಳಗೆ]** | | | | | |
| ಅ | ಕೌನ್ಸಿಲಿಂಗ್‌ಗೆ ಲಭ್ಯವಿರುವ ವೃಂದವಾರು/ ವಿಷಯವಾರು ಖಾಲಿ ಹುದ್ದೆಗಳ ಪ್ರಕಟಣೆ | 01/08/2024 | 01/08/2024 | 01/08/2024 | ವಿಭಾಗೀಯ ಸಹನಿರ್ದೇಶಕರು. ಜಂಟಿನಿರ್ದೇಶಕರು (ಆಡಳಿತ) ನಿರ್ದೇಶಕರು ಧಾರವಾಡ/ ಕಲಬುರ್ಗಿ ಅಪರ ಆಯುಕ್ತಾಲಯ |
| ಆ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಕೋರಿಕೆ ವರ್ಗಾವಣೆಗಳ ಗಣಕೀಕೃತ ಕೌನ್ಸೆಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ. | 02/08/2024 ರಿಂದ 05/08/2024 | 06/08/2024 ರಿಂದ 08/08/2024 | 09/08/2024 ಪೂರ್ವಾಹ್ನ | |
| ಇ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಪರಸ್ಪರ ವರ್ಗಾವಣೆಗಳ ಗಣಕೀಕೃತ ಕೌನ್ಸೆಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ. | 12/08/2024 ಪೂರ್ವಾಹ್ನ | 12/08/2024 ಅಪರಾಹ್ನ | 13/08/2024 ಪೂರ್ವಾಹ್ನ | ವಿಭಾಗೀಯ ಸಹನಿರ್ದೇಶಕರು/ ಜಂಟಿನಿರ್ದೇಶಕರು (ಆಡಳಿತ) |
| ಈ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಕನಿಷ್ಠ (3 ರಿಂದ 5 ವರ್ಷದೊಳಗಡೆ) ಅವಧಿ ಪೂರೈಸಿದ ನಿರ್ದಿಷ್ಟಪಡಿಸಿದ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಕೋರಿಕೆ ವರ್ಗಾವಣೆಯ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ. (ಆಯಾ ವಿಭಾಗದೊಳಗೆ)<br>• ಸರ್ಕಾರದ ಆದೇಶದ ಮೇರೆಗೆ ನಿರ್ಧಿಷ್ಟಪಡಿಸಿದ ಹುದ್ದೆಗಳಿಗೆ ವರ್ಗಾವಣೆಗೊಂಡಿದ್ದು ಲಿಖಿತ ಪರೀಕ್ಷೆಯಲ್ಲಿ ಅರ್ಹತೆ ಹೊಂದದೇ ಇರುವ ಅಭ್ಯರ್ಥಿಗಳಿಗೆ ಆಯ್ಕೆಯಾಗದಿದ್ದಲ್ಲಿ ಅಂತಹವರುಗಳನ್ನು ಕೌನ್ಸಿಲಿಂಗ್ ಮೂಲಕ ಶಾಲೆಗೆ ಸ್ಥಳ ನಿಯುಕ್ತಿಗೊಳಿಸಲಾಗುವುದು. | ಅನ್ವಯವಾಗುವುದಿಲ್ಲ | ಅನ್ವಯವಾಗುವುದಿಲ್ಲ | 14/08/2024 | ಜಂಟಿ ನಿರ್ದೇಶಕರು (ಆಡಳಿತ) ಬೆಂಗಳೂರು ಮತ್ತು ನಿರ್ದೇಶಕರು ಧಾರವಾಡ/ಕಲಬುರ್ಗಿ ಅಪರ ಆಯುಕ್ತಾಲಯ |

| (4) ಅಂತರ್ ವಿಭಾಗೀಯ ಹಂತದ ವರ್ಗಾವಣೆ ಕ್ರಮಗಳು [ವಿಭಾಗದ ಹೊರಗೆ] | | | | | |
|---|---|---|---|---|---|
| ಅ | ವಿಭಾಗದ ಹೊರಗಿನ ಕೋರಿಕೆ ವರ್ಗಾವಣೆ ಕೌನ್ಸಿಲಿಂಗ್ ಅಂತಿಮ ಖಾಲಿ ಹುದ್ದೆಗಳ ಪಟ್ಟಿ ಪ್ರಕಟ. | 14/08/2024 | 14/08/2024 | 14/08/2024 | ನಿರ್ದೇಶಕರು ಪ್ರಾಥಮಿಕ / ಪ್ರೌಢ ಹಾಗೂ ಪ್ರೌಢ ಶಾಲಾ ಮುಖ್ಯ ಶಿಕ್ಷಕರ ವೃಂದಕ್ಕೆ ಸಂಬಂಧಪಟ್ಟಂತೆ ಜಂಟಿ ನಿರ್ದೇಶಕರು (ಆಡಳಿತ) ಬೆಂಗಳೂರು |
| ಆ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಕೋರಿಕೆ ವರ್ಗಾವಣೆಗಳ ಗಣಕೀಕೃತ ಕೌನ್ಸೆಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ. | 17/08/2024 ರಿಂದ 20/08/2024 | 21/08/2024 ರಿಂದ 23/08/2024 | 26/08/2024 | |
| ಇ | ಅಂತಿಮ ಜ್ಯೇಷ್ಠತಾ ಪಟ್ಟಿಯಂತೆ ಪರಸ್ಪರ ವರ್ಗಾವಣೆಗಳ ಗಣಕೀಕೃತ ಕೌನ್ಸೆಲಿಂಗ್ ಮೂಲಕ ಸ್ಥಳ ನಿಯುಕ್ತಿ ಪ್ರಕ್ರಿಯೆ. | 27/08/2024 | 27/08/2024 | 27/08/2024 | |

**(*** ವೇಳಾಪಟ್ಟಿಯು ತಾಂತ್ರಿಕ ಕಾರಣಗಳಿಂದ ಅಡಚಣೆಯಾದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.)**

ಮೇಲ್ಕಂಡಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2020 ಬೆಂಗಳೂರು ದಿನಾಂಕ:27/03/2020 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 8 ಇಟಿಆರ್ 2020 ದಿನಾಂಕ:22/07/2020 ಹಾಗೂ 2022 ರ ತಿದ್ದುಪಡಿ ವರ್ಗಾವಣಾ ಕಾಯ್ದೆ/ನಿಯಮಗಳು ಮತ್ತು ದಿನಾಂಕ: 15/03/2024ರಂದು ಹೊರಡಿಸಲಾಗಿರುವ ವರ್ಗಾವಣಾ ಅಧಿಸೂಚನೆಯಲ್ಲಿನ ಮಾರ್ಗಸೂಚಿಯಂತೆ ಹಾಗೂ ಇಲಾಖಾ ಆದೇಶಗಳನ್ನು ಸ್ಪಷ್ಟವಾಗಿ ಅರ್ಥೈಸಿಕೊಂಡು, ಪ್ರಸ್ತಾಪಿತ ವರ್ಗಾವಣಾ ಪ್ರಕ್ರಿಯೆಗಳನ್ನು ಯಾವುದೇ ಲೋಪದೋಷಗಳಿಗೆ ಎಡೆಮಾಡಿಕೊಡದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಲು ತಿಳಿಸಿದೆ. ಒಂದು ವೇಳೆ ಇಲಾಖಾ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಅರ್ಜಿಗಳ ಅನುಮೋದನೆ ಮತ್ತು ವರ್ಗಾವಣಾ ಕೌನ್ಸಿಲಿಂಗ್‌ನಲ್ಲಿ ಅಕ್ರಮಗಳು ಕಂಡುಬಂದಲ್ಲಿ ಅಂತಹಾ ಸಕ್ಷಮ ಪ್ರಾಧಿಕಾರದ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮಗಳನ್ನು ಕೈಗೊಳ್ಳಲಾಗುವುದು.

(ಬಿ.ಬಿ. ಕಾವೇರಿ) ಭಾ.ಆ.ಸೇ.
ಆಯುಕ್ತರು.
ಶಾಲಾ ಶಿಕ್ಷಣ ಇಲಾಖೆ. ಬೆಂಗಳೂರು.